ಅಧ್ಯಕ್ಷರು: ಈಗ ಎರಡನೇ ಪೂರಕ ಕಾರ್ಯಕಲಾಪಗಳ ಪಟ್ಟಿ, ಸಭೆಯ ಮುಂದಿಡಲಾಗುವ ಕಾಗದಪತ್ರ.

11. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

ಕಾರ್ಯದರ್ಶಿ: ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ:

(i)ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ಎರಡನೇ ತಿದ್ದುಪಡಿ) ವಿಧೇಯಕ, 2013

(ii)ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕ, 2013

(iii)ಅಂತರ್–ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ ವಿಧೇಯಕ, 2013

ಅಧ್ಯಕ್ಷರು: ಮಂಡಿಸಲಾಯಿತು.

(ಅನುಬಂಧ–14,15 ಮತ್ತು 16)

12. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ಎರಡನೇ ತಿದ್ದುಪಡಿ) ವಿಧೇಯಕ,

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2013ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಸಿ.ಟಿ.ರವಿ (ಉನ್ನತ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ಹಿಂದೆ ವಿಚಾರಣೆ ಮಾಡುವ ಅಧಿಕಾರ ಸರಕಾರಕ್ಕೆ ಇರಲಿಲ್ಲ. ಗೌವರ್ನರ್‌ಗೆ ಪತ್ರ